''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಹರಿಜನ ಗಿರಿಜನ ಮತ್ತು ಹಿಂದುಳಿದ ವರ್ಗದವರ ಕಲ್ಯಾಣ''ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜ್ಯಸ್ವಖಾತೆಯಲ್ಲಿ 230,29,74,000ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 30,56,00,000ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕು''

ಅಭಿಯಾಚನೆ ಕ್ರಮಾಂಕ:-61-ಮಹಿಳಾ ಮತ್ತು ಮಕ್ಕಳ ಕಲ್ಯಾಣ

''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಮಹಿಳಾ ಮತ್ತು ಮಕ್ಕಳ ಕಲ್ಯಾಣ''ಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜ್ಯಸ್ವಖಾತೆಯಲ್ಲಿ 224,18,70,000ರೂ.ಗಳಿಗಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 100,00,000ರೂ.ಗಳಿಗಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕು''

ಅಭಿಯಾಚನೆ ಕ್ರಮಾಂಕ:-62-ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ

''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-1995ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಮಲೆನಾಡು ಪ್ರದೇಶಾಭಿವೃದ್ಧಿ''ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರಕಾರಕ್ಕೆ ರಾಜ್ಯಸ್ವಖಾತೆಯಲ್ಲಿ 42,14,50,000ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ)ಮಂಜೂರು ಮಾಡುವುದು''

ಶಾಸನ ರಚನಾ ಕಲಾಪಗಳು

1994ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) :- ಮಾನ್ಯ ಅಧ್ಯಕ್ಷರೇ 1994ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾಪ ಏನೆದರೆ ''1994ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕವನ್ನು ಮಂಡಿಸಲು ಅನುಮತಿ ನೀಡಲಾಯಿತು

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು) : - ಮಾನ್ಯ ಅಧ್ಯಕ್ಷರೆ, 1994ರ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:-ವಿಧೇಯಕವನ್ನು ಮಂಡಿಸಲಾಗಿದೆ ಅನುಬಂಧ 111

1994ರ ಕರ್ನಾಟಕ ಅನುಸೂಚಿತ ಜಾತಿ, ಅನುಸೂಚಿತ ಪಂಗಡಗಳು ಮತ್ತು ಇತರ ಹಿಂದುಳಿದ ವರ್ಗಗಳ (ಶೈಕ್ಷಣಿಕ ಸಂಸ್ಥೆಗಳು ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಮತ್ತು ಹುದ್ದೆಗಳಲ್ಲಿ ಮೀಸಲಾತಿ) ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಆರ್.ವಿ.ದೇಶಪಾಂಡೆ (ವಿರೋಧ ಪಕ್ಷದ ನಾಯಕರು):- ಮಾನ್ಯ ಅಧ್ಯಕ್ಷರೆ. ನಾನು ಪಾಯಿಂಟ್ ಆಫ್ ಆರ್ಡರ್ ಕೈಸ್ ಮಾಡುತ್ತಿದ್ದೇನೆ ಬಹಳ ಸ್ಪಷ್ಟವಾಗಿ ಈ ಬಗ್ಗೆ ಹೇಳುತ್ತಿದ್ದೇನೆ. ಏನೆಂದರೆ, ಮೀಸಲಾತಿಗೆ ನಮ್ಮ ವಿರೋಧವಿಲ್ಲ. ಮೀಸಲಾತಿ ಕೊಡಬೇಕು. ಮೀಸಲಾತಿಯನ್ನು ಜಾರಿಗೆ ತಂದದ್ದು, ನಮ್ಮ ಸರ್ಕಾರ; ಆ ಕ್ರೆಡಿಟ್ ನಮ್ಮ ಸರ್ಕಾರಕ್ಕೆ ಬರಬೇಕು. ಏಕೆಂದರೆ ಮಂಡಲ್ ಕಮೀಷನ್ ವಿಚಾರ ತಮಗೆ ಗೊತ್ತು. ಶ್ರೀ ಮೊರಾರ್ಜಿ ದೇಸಾಯಿಯವರು ಪ್ರಧಾನಮಂತ್ರಿಗಳಾಗಿದ್ದಾಗ ಈ ಆಯೋಗ ರಚನೆಯಾಯಿತು. ರಚನೆಯಾದ ನಂತರ ಶ್ರೀಮತಿ ಇಂದಿರಾ ಗಾಂಧೀ ಮತ್ತು ರಾಜೀವ್‌ಗಾಂಧೀಯವರ ಕಾಲದಲ್ಲಿ ಅದನ್ನು ಕೋಲ್ಡ್ ಸ್ಟೋರೇಜ್‌ನಲ್ಲಿಟ್ಟರು. ಪುನ:-ಶ್ರೀ ವಿ.ಪಿ.ಸಿಂಗ್ ಅವರು ಅದನ್ನು ಜಾರಿಗೆ ತಂದರು. ಅಷ್ಟೇ ಅಲ್ಲ; ಶ್ರೀ ರಾಮಕೃಷ್ಣ ಹೆಗಡೆರವರು ಮುಖ್ಯಮಂತ್ರಿಗಳಾಗಿದ್ದಾಗ ಹಿಂದುಳಿದ ಜನಾಂಗಕ್ಕೆ ಮೀಸಲಾತಿಯನ್ನು ಕೊಟ್ಟಿದ್ದಾರೆ. ಈಗ ಮುಖ್ಯವಾಗಿ ಏನಿದೆ ಏಂದರೆ, ಮಾನ್ಯ ಸಚಿವರು ಏನು ಬಿಲ್ ಮಂಡನೆ ಮಾಡುತ್ತಿದ್ದಾರೆ, ಅದನ್ನು ಮುಖ್ಯವಾಗಿ ನೊಡಬೇಕಾಗಿದೆ, because it does not come under the jurisdiction of this legislature. It does not come under that.

ಶ್ರೀ ಹಾರ್ನಳ್ಳಿ ರಾಮಸ್ವಾವಿ:-ಈ ವಿಧೇಯಕದ ಅಂಶಗಳು ಸರಿಯಾಗಿದೆಯೇ ಇಲ್ಲವೇ ಎನ್ನುವುದನ್ನು ಮಂಡನೆಯಾದ ಮೇಲೆ ಚರ್ಚೆ ಮಾಡುವುದು. ಮಂಡನೆಗೆ ಮುಂಚೆ ಅಲ್ಲ.